(3) ವಾಸದ/ವಾಣಿಜ್ಯ ಉದ್ದೇಶಕ್ಕಾಗಿ ನೀಡಲಾಗಿರುವ ಅಥವಾ ಪಡೆಯಲಾಗಿರುವ ಕಟ್ಟಡಗಳಿಂದ ಬರುವ ಬಾಡಿಗೆ ಮಾಸಿಕ ರೂ.2000/– ಮೀರುವವರು ಬಿಪಿಎಲ್ ಪಡಿತರ ಚೀಟಿಗೆ ಅರ್ಹರಿರುವುದಿಲ್ಲ.

ಎಪಿಎಲ್ ಪಡಿತರ ಚೀಟಿ :

ಗ್ರಾಮಾಂತರ ಪ್ರದೇಶದಲ್ಲಿ ಗರಿಷ್ಟ 12,000/– ರೂ.ಗಳ ವಾರ್ಷಿಕ ವರಮಾನಕ್ಕಿಂತ ಮೇಲ್ಪಟ್ಟ, ಪಟ್ಟಣ ಪ್ರದೇಶದಲ್ಲಿ 17,000/– ರೂ.ಗಳ ವಾರ್ಷಿಕ ವರಮಾನಕ್ಕಿಂತ ಮೇಲ್ಪಟ್ಟ ಆದಾಯವುಳ್ಳ ಕುಟುಂಬಗಳು ಎಪಿಎಲ್ ಪಡಿತರ ಚೀಟಿಯನ್ನು ಪಡೆದುಕೊಳ್ಳಲು ಅರ್ಹರಿರುತ್ತಾರೆ.

ಉ) ಹೌದು.

ಊ) ಉದ್ಭವಿಸುವುದಿಲ್ಲ.

ಪ್ಯಾಕೇಜ್ ಮತ್ತು ಐ.ಟಿ. & ಬಿ.ಟಿ. ರಸ್ತೆಗಳು

1030 (1447, 1116) ಶ್ರೀ ರಾಜು. ಕೆ (ರಾಮನಗರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ತಾಲ್ಲೂಕಿನಲ್ಲಿ ನಡೆಯುತ್ತಿರುವ ಪ್ಯಾಕೇಜ್ ಮತ್ತು ಐ.ಟಿ. ಬಿ.ಟಿ. ರಸ್ತೆಗಳ ಕೆಲಸ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹಾಗಿದ್ದಲ್ಲಿ, ಈ ಕಾಮಗಾರಿಗಳ ಅಪೂರ್ಣವಾಗಿರಲು ಕಾರಣ ಗಳೇನು;

ಇ) ಈ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಈ) ರಾಮನಗರ ಮಧ್ಯ ಭಾಗದಲ್ಲಿ ಮೈಸೂರು–ಬೆಂಗಳೂರು ರಸ್ತೆಯಲ್ಲಿ ಇತ್ತೀಚೆಗೆ ವಾಹನಗಳ ಸಂಚಾರ ದಟ್ಟಣೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಈ ವಾಹನ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಊ) ರಾಮನಗರ ಬಸ್ ನಿಲ್ದಾಣದಲ್ಲಿ ಮಾಗಡಿ ರಸ್ತೆಯಿಂದ ರಾಮನಗರ ಟೌನ್‌ಗೆ ಅಂಡರ್‌ಪಾಸ್ ರಸ್ತೆ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಋ) ಹಾಗಿದ್ದಲ್ಲಿ, ಅಂಡರ್ ಪಾಸ್ ನಿರ್ಮಿಸಲು ಸರ್ಕಾರ ಅನುದಾನವನ್ನೇನಾದರೂ ನಿಗದಿ ಪಡಿಸಿದೆಯೇ;

ಎ) ಹಾಗಿದ್ದಲ್ಲಿ, ಅಂಡರ್ ಪಾಸ್ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ರಾಮನಗರ ತಾಲ್ಲೂಕಿನಲ್ಲಿ ಒಟ್ಟು 4 ಐ.ಟಿ. ಬಿ.ಟಿ. ಪ್ಯಾಕೇಜ್ ರಸ್ತೆ ಕಾಮಗಾರಿಗಳು (ಕಸಬಾ, ಬಿಡದಿ, ಕೈಲಂಚ ಹಾಗೂ ಕೂಟಗಲ್ ಹೋಬಳಿಗಳಿಗೆ) ಅನುಮೋದನೆಗೊಂಡಿದೆ.

ಈ ನಾಲ್ಕು ಪ್ಯಾಕೇಜ್‌ಗಳು ಒಳಗೊಂಡಂತೆ ಒಟ್ಟಾರೆ 57 ರಸ್ತೆಗಳು ಸೇರಿದ್ದು, ಇದರಲ್ಲಿ 25 ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಉಳಿದ ಕಾಮಗಾರಿಗಳು ಪ್ರಗತಿಯ ವಿವಿಧ ಹಂತದಲ್ಲಿದೆ.

2009–10ನೇ ಸಾಲಿನಲ್ಲಿ ಅನುದಾನದ ಕೊರತೆಯಿಂದಾಗಿ ಕಾಮಗಾರಿಗಳು ಪೂರ್ಣಗೊಂಡಿರುವುದಿಲ್ಲ.

ಇ) 2009–10ನೇ ಸಾಲಿನಲ್ಲಿ ಸದರಿ ಯೋಜನೆಯ ರಸ್ತೆ ಕಾಮಗಾರಿಗಳನ್ನು ಡಾ: ವಿಶ್ವನಾಥ್‌ರವರ ನೇತೃತ್ವದಲ್ಲಿ ರಚಿಸಲಾಗಿರುವ ಗುಣನಿಯಂತ್ರಣ ಕಾರ್ಯಪಡೆಯ ವತಿಯಿಂದ ಪರಿವೀಕ್ಷಣೆ ಮಾಡಿಸಿ ವರದಿ ಹಾಗೂ ಶಿಫಾರಸ್ಸುಗಳನ್ನು ಪಡೆಯಲು ಸರ್ಕಾರ ತೀರ್ಮಾನಿಸಿದ್ದು, ಈ ಸಾಲಿನಲ್ಲಿ ಸದರಿ ಯೋಜನೆಗೆ ಯಾವುದೇ ಅನುದಾನ ಒದಗಿಸಿರಲಿಲ್ಲ. ಈಗ ನಿಯಂತ್ರಣ ಕಾರ್ಯಪಡೆಯ ವರದಿ/ಶಿಫಾರಸ್ಸುಗಳು ಸ್ವೀಕೃತವಾಗಿದ್ದು ಅದರಂತೆ ಮುಂದಿನ ಸಾಲುಗಳಲ್ಲಿ ಅನುದಾನದ ಲಭ್ಯತೆಗನುಗುಣವಾಗಿ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳ ಲಾಗುವುದು.

ಈ) ಸರ್ಕಾರದ ಗಮನಕ್ಕೆ ಬಂದಿದೆ.

2008–09 ರಲ್ಲಿ ಪಿ.ಸಿ. ಯು 52143.00 ಆಗಿರುತ್ತದೆ.

2009–10 ರಲ್ಲಿ ಪಿ.ಸಿ.ಯು 57312.50 ಆಗಿರುತ್ತದೆ.

ಊ) ಮೇಲ್ಕಂಡ ವಾಹನ ಸಂಚಾರ ದಟ್ಟಣೆಗೆ ಐ.ಆರ್.ಸಿ. ಅನುಸಾರ ಈಗಿರುವ ಚತುಷ್ಪಥ ರಸ್ತೆ ಹೊರತುಪಡಿಸಿ ಹೆಚ್ಚುವರಿಯಾಗಿ ಚತುಷ್ಪಥ ರಸ್ತೆ ನಿರ್ಮಾಣ ಅವಶ್ಯವಿದ್ದು, ಈ ಬಗ್ಗೆ ಪರಿಶೀಲಿಸಲಾಗುವುದು. ಅಂಡರ್ ಪಾಸ್ ರಸ್ತೆ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. ಸದರಿ ವಿಷಯವು ರಾಮನಗರ, ಚನ್ನಪಟ್ಟಣ ಮುನಿಸಿಪಾಲಿಟಿ ಪ್ರಾಧಿಕಾರದ ವ್ಯಾಪ್ತಿಗೆ ಬರುತ್ತದೆ.

ಋ) ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಅನ್ವಯಿಸುವುದಿಲ್ಲ.

ಎ) ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಅನ್ವಯಿಸುವುದಿಲ್ಲ.

ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿ ವಿತರಿಸುವುದು

1031 (1446) ಶ್ರೀರಾಜು ಕೆ. (ರಾಮನಗರ) : ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲೆಯಲ್ಲಿ ಇದುವರೆವಿಗೂ ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);

ಆ) ರಾಮನಗರ ಜಿಲ್ಲೆಯಲ್ಲಿ ಪಡಿತರ ಚೀಟಿಯ ವಿತರಣೆಯಲ್ಲಿ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು (ಪ್ರತಿಯನ್ನು ನೀಡುವುದು);

ಈ) ಪಡಿತರ ಚೀಟಿಯನ್ನು ವಿತರಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು (ಪ್ರತಿಯನ್ನು ನೀಡುವುದು);

ಉ) ರಾಮನಗರ ಜಿಲ್ಲೆಯಲ್ಲಿ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿಗಳನ್ನು ಸಮರ್ಪಕವಾಗಿ ವಿತರಿಸಲಾಗಿದೆಯೇ;

ಊ) ಹಾಗಿಲ್ಲದಿದ್ದಲ್ಲಿ ಸಮರ್ಪಕವಾಗಿ ಪಡಿತರ ಚೀಟಿಗಳನ್ನು ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?